**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

**ಸತ್ರ ಮೊಕದ್ದಮೆ ನಂಃ 75/2023**

| | | |
|---|---|---|
| ಸಾಕ್ಷಿದಾರರ ಹೆಸರು | - ನಾಗರಾಜ್ | ಪಿಡಬ್ಲೂ - 11 |
| ತಂದೆಯ ಹೆಸರು | - ಮೇಲಗಿರಿಯಪ್ಪ | ಸಿಡಬ್ಲೂ - 21 |
| ವಯಸ್ಸು | - 50 ವರ್ಷ | |
| ಉದ್ಯೋಗ | - ಮುಖ್ಯ ಪೇದೆ 276, ಜಯಪುರ ಪೊಲೀಸ್ ಠಾಣೆ | |
| ವಾಸ ಸ್ಥಳ | - ಜಯಪುರ | |

ದಿನಾಂಕಃ 10.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

(ಆರೋಪಿಯು ನ್ಯಾಯಾಂಗ ಬಂದನದಲ್ಲಿದ್ದು, ಆತನನ್ನು ಈ ದಿನ ***Google meet*** ನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಕಾರಾಗೃಹದಿಂದ ಹಾಜರುಪಡಿಸಲಾಗಿರುತ್ತದೆ. ಸಾಕ್ಷಿಯ ವಿಚಾರಣೆಯನ್ನು ದಾಖಲಿಸುವ ಮೊದಲು ಆರೋಪಿಗೆ ಸಾಕ್ಷಿ ಮಾತನಾಡುವುದು ಸರಿಯಾಗಿ ಕೇಳಿಸುತ್ತಿದೆ ಮತ್ತು ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಸಾಕ್ಷಿಯ ವಿಚಾರಣೆಯನ್ನು ದಾಖಲಿಸಲು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲವೆಂದು ಖಾತ್ರಿಪಡಿಸಿಕೊಳ್ಳಲಾಯಿತು.)

ಮುಖ್ಯ ವಿಚಾರಣೆ : ಸರ್ಕಾರಿ ಅಭಿಯೋಜಕರಿಂದಃ

1. ನಾನು 2014 ರಿಂದ ದಿಃ 31-07-2024 ರವರೆಗೆ ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯ ನಿರ್ವಹಿಸಿದ್ದೇನು.

2. ದಿನಾಂಕಃ 10-03-2023 ರಂದು ನಾನು ಠಾಣೆಯಲ್ಲಿದ್ದಾಗ ಫ್ರಾಸಾ.8 ರವರು ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿ ಹಲ್ಲೆಯ ಹಿನ್ನಲೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಗಾಯಾಳು ರವಿರವರ ಹೇಳಿಕೆಯನ್ನು ಪಡೆದುಕೊಂಡು ಬರುವಂತೆ ಮೌಖಿಕವಾಗಿ ನನಗೆ ಸೂಚಿಸಿ ಕಳುಹಿಸಿದ್ದರು.

3. ಅದರಂತೆ ನಾನು ಸಂಜೆ 4.50 ಗಂಟೆಗೆ ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಸದರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ನೀಡಿದ ಎಂ.ಎಲ್.ಸಿ. ಮಾಹಿತಿ ಪತ್ರವನ್ನು ಸ್ವೀಕರಿಸಿದೆನು. ಸಾಕ್ಷಿಯು ಸದರಿ ಎಂ.ಎಲ್.ಸಿ. ಮಾಹಿತಿ ಪತ್ರವನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ಸದರಿ ಎಂ.ಎಲ್.ಸಿ. ಮಾಹಿತಿ ಪತ್ರವನ್ನು ನಿಪಿ.44 ಎಂದು, ಅದರಲ್ಲಿರುವ ಸಾಕ್ಷಿಯ ಸ್ವೀಕೃತಿ ಸಹಿಯನ್ನು ನಿಪಿ.44(ಎ) ಎಂದು ಗುರುತಿಸಲಾಯಿತು.

4. ಸದರಿ ಎಂ.ಎಲ್.ಸಿ. ಮಾಹಿತಿ ಪತ್ರದಲ್ಲಿ ವೈದ್ಯಾಧಿಕಾರಿಗಳು "Pt is in critical condition unable to give statement" ಎಂದು ನಮೂದು ಮಾಡಿರುತ್ತಾರೆ. ಹಾಗಾಗಿ ಗಾಯಾಳುವಿನ ಜೊತೆ ಇದ್ದ ಅವರ ಹೆಂಡತಿಯಾದ ಫ್ರಾಸಾ.1 ಜಯರವರು ಘಟನೆಗೆ ಸಂಬಂಧಿಸಿದಂತೆ ನೀಡಿದ ಹೇಳಿಕೆಯನ್ನು ಸಂಜೆ 5.30 ರಿಂದ 6.30 ಗಂಟೆಯವರೆಗೆ ಪಡೆದುಕೊಂಡೆನು. ನಂತರ ವೈದ್ಯರು ನೀಡಿದ ಮಾಹಿತಿ ಪತ್ರ ಮತ್ತು ಸದರಿ ಹೇಳಿಕೆಯೊಂದಿಗೆ ಸಂಜೆ 6.45 ಗಂಟೆಗೆ ಠಾಣೆಗೆ ಹಿಂದಿರುಗಿ ಆಗ್ಗ

ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿದ್ದ ಫ್ರಾಸಾ.8 ರವರಿಗೆ ಅವುಗಳನ್ನು ಮುಂದಿನ ಕ್ರಮಕ್ಕಾಗಿ ಹಾಜರುಪಡಿಸಿದೆನು.

5. ಸಾಕ್ಷಿಯು ಈಗಾಗಲೇ ನಿಪಿ.1 ಎಂದು ಗುರುತಿಸಲ್ಪಟ್ಟಿರುವ ಹೇಳಿಕೆಯನ್ನು ನೋಡಿ ಮೇಲೆ ಹೇಳಿದಂತೆ ನಾನು ದಾಖಲು ಮಾಡಿದ ಫ್ರಾಸಾ.1 ರವರ ಹೇಳಿಕೆ ಅದೇ ಎಂದು ನುಡಿದಿರುತ್ತಾರೆ. ನಿಪಿ.1 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ.1(ಸಿ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ

(ಆರೋಪಿ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಯಿತು)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ